

ಬಿಸಿಲು
ಬೆಳದಿಂಗಳು

ಡಾ. ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ
swamiji@taralabalu.org

# ಯುಗ ಯುಗಾದಿ ಕಳೆದರೂ....

**ಭಾ**ರತೀಯರು ವಿಶ್ವದ ಇತರೆ ದೇಶಗಳ ಜನರಂತೆ ದೈನಂದಿನ ವ್ಯವಹಾರದಲ್ಲಿ ಇಂಗ್ಲೀಷ್ ಕ್ಯಾಲೆಂಡರನ್ನೇ ಅನುಸರಿಸುತ್ತಾರೆ. ಆದರೆ ಹಬ್ಬ ಹರಿದಿನಗಳನ್ನು ಆಚರಿಸುವಾಗ, ಮದುವೆ, ಗೃಹಪ್ರವೇಶ ಇತ್ಯಾದಿ ಮಂಗಳ ಕಾರ್ಯಗಳನ್ನು ಮಾಡುವಾಗ ಮಾತ್ರ ಸಾಂಪ್ರದಾಯಿಕವಾಗಿ ದೇಶೀಯ ಪಂಚಾಂಗದ ತಿಥಿ ವಾರ ನಕ್ಷತ್ರಗಳನ್ನು ನೋಡುತ್ತಾರೆ. ಅಂತಹ ಹಬ್ಬಗಳಲ್ಲಿ ಕರ್ನಾಟಕ, ಆಂಧ್ರ, ಮಹಾರಾಷ್ಟ್ರಗಳ ಒಂದು ಪ್ರಮುಖವಾದ ಹಬ್ಬ 'ಯುಗಾದಿ'. ಉತ್ತರ ಭಾರತೀಯರು ಸೂರ್ಯನ ಚಲನೆಯನ್ನು ಆಧರಿಸಿ ಸೌರಮಾನ ಯುಗಾದಿಯನ್ನು ಆಚರಿಸಿದರೆ, ದಕ್ಷಿಣ ಭಾರತೀಯರು ಚಂದ್ರನ ಚಲನೆಯನ್ನು ಆಧರಿಸಿ ಚಾಂದ್ರಮಾನ ಯುಗಾದಿಯನ್ನು ಆಚರಿಸುತ್ತಾರೆ. ಫಾಲ್ಗುಣ ಮಾಸದ ಅಮಾವಾಸ್ಯೆಯ ಮರುದಿನ ಬರುವ ಚೈತ್ರ ಮಾಸದ ಪಾಡ್ಯದ ದಿವಸವೇ ಯುಗಾದಿ ಹಬ್ಬ. ಹೊಸ ವರ್ಷದ ಮೊದಲ ದಿನ. ಹೊಸ ಚಿಗುರಿನಿಂದ ಗಿಡ ಮರಗಳು ಶೋಭಿಸುವಂತೆ ಜನರು ಮೈಗೆ ಎಣ್ಣೆ ನೀರು ಹಾಕಿಕೊಂಡು ಹೊಸ ಬಟ್ಟೆಯನ್ನು ಉಟ್ಟು ಸಡಗರ ಸಂಭ್ರಮಗಳಿಂದ ಹೊಸ ವರ್ಷವನ್ನು ಸ್ವಾಗತಿಸುತ್ತಾರೆ. ವರಕವಿ ದ.ರಾ. ಬೇಂದ್ರೆಯವರ ಮಾತಿನಲ್ಲಿ ಹೇಳುವುದಾದರೆ:

ಯುಗ ಯುಗಾದಿ ಕಳೆದರೂ
ಯುಗಾದಿ ಮರಳಿ ಬರುತಿದೆ
ಹೊಸ ವರುಷಕೆ ಹೊಸ ಹರುಷವ
ಹೊಸತು ಹೊಸತು ತರುತಿದೆ!

ಈ ಯುಗಾದಿ ಹಬ್ಬ ಕರ್ನಾಟಕದಲ್ಲಿ ಎಷ್ಟೊಂದು ಪ್ರಸಿದ್ಧವೆಂದರೆ ಗ್ರಾಮೀಣ ಜನರ ಬಾಯಲ್ಲಿ ಹೆಚ್ಚು ಪ್ರಚಲಿತವಾದ ಹಾಗೂ ಅತ್ಯಂತ ಶಕ್ತಿಯುತವಾದ ನಾಣ್ನುಡಿಯೇ ಇದೆ: "ಊರೆಲ್ಲಾ ಉಗಾದಿ ಮಾಡಿದರೆ, ಅಡ್ನಾಡಿ ಅಮವಾಸ್ಯೆ ಮಾಡಿತ್ತಂತೆ!' ಜನರೊಂದಿಗೆ ಹೊಂದಿಕೊಂಡು ಬಾಳುವುದನ್ನು ಬಿಟ್ಟು ತನ್ನದೇ ಆದ ವಿಚಿತ್ರ ರೀತಿಯಲ್ಲಿ ವರ್ತಿಸುವ ಸ್ವಪ್ರತಿಷ್ಠೆಯ ವ್ಯಕ್ತಿಯನ್ನು ಕಂಡು ಹಳ್ಳಿಯ ಜನರು ಆಡುವ ಮೂದಲಿಕೆಯ ಮಾತಿದು.

ಸಂಜೆ ಪಡುವಣ ದಿಕ್ಕಿನ ಕಡೆ ದಿಟ್ಟಿಸಿ ನಾ ಮುಂದು ತಾ ಮುಂದು ಎಂದು ಪೈಪೋಟಿಯಿಂದ ತುದಿಗಾಲ ಮೇಲೆ ನಿಂತು ಮಾಡುವ 'ಚಂದ್ರ ದರ್ಶನ'ವೇ ಹೊಸ ವರ್ಷದ ಶುಭಾರಂಭದ ಸಂಕೇತ. ನಂತರ ಗುರುಹಿರಿಯರಿಗೆ ನಮಸ್ಕರಿಸಿ ಮಾಡುವ 'ಪಂಚಾಂಗ ಶ್ರವಣ' ಹೊಸ ವರ್ಷದ ಜಾತಕವನ್ನು ತಿಳಿಯುವ ಕುತೂಹಲ! ಇಂದು ಜನರು ನಿತ್ಯವೂ ದಿನಪತ್ರಿಕೆಗಳಲ್ಲಿ ಷೇರು ಪೇಟೆಯ ಧಾರಣೆಯನ್ನು ತಿಳಿದುಕೊಳ್ಳುವಂತೆ, ವರ್ಷಾರಂಭದಲ್ಲಿ ಚಂದ್ರ ಎತ್ತ ವಾಲಿದ್ದಾನೆಂಬುದರ ಮೇಲೆ ಪಂಚಾಂಗವನ್ನು ನೋಡಿ, ಆ ವರ್ಷದ ಮಳೆ, ಬೆಳೆ, ವ್ಯಾಪಾರ ಉದ್ದಿಮೆಯ ಲಾಭ-ನಷ್ಟಗಳ ಲೆಕ್ಕಾಚಾರ ಹಾಕುತ್ತಾರೆ. ಮೂರು ವರ್ಷಗಳ ಹಿಂದೆ ಹೊಸ ಹರುಷದಿಂದ ಸ್ವಾಗತಿಸಿದ್ದ ತಾರಣ ಸಂವತ್ಸರ ದೈತ್ಯಾಕಾರದ ಸುನಾಮಿ ಅಲೆಗಳಿಂದ ಇಡೀ ಜಗತ್ತನ್ನು ತಲ್ಲಣಗೊಳಿಸಿ ನಿರ್ಗಮಿಸಿತ್ತು. ಈ ವಾರಾಂತ್ಯಕ್ಕೆ ಹಿಂದಕ್ಕೆ ಸರಿದು ಹೋಗಲಿರುವ ಈಗಿನ ಸರ್ವಜಿತು ಸಂವತ್ಸರ ಕುರಿತು ಕಳೆದ ಯುಗಾದಿಯಂದು ಕೇಳಿದ್ದ ಪಂಚಾಂಗ ಶ್ರವಣ: **"ಎಲ್ಲ ಜನರು ಸುಖ-ಸಂತೋಷದಿಂದ ಇರುವರು. ಆದರೆ ಭಯಂಕರ ಯುದ್ಧವಾಗುವ ಸಂಭವವಿರುವುದರಿಂದ ಭಯ-ಭೀತಿಯಿಂದ ಪ್ರಜೆಗಳು ಆತಂಕಕ್ಕೆ ಒಳಗಾಗುವರು. ದೇಶದ ನಾಯಕ ವರ್ಗದವರಿಗೆ ಅನಿಷ್ಟಕಾರಕವು."** ಇದು ಒಂದು ರೀತಿಯಲ್ಲಿ ಕರ್ನಾಟಕದ ರಾಜಕೀಯ ವಿದ್ಯಮಾನಗಳ ದೃಷ್ಟಿಯಿಂದ ನಿಜವೆನಿಸಿದೆ. ಸಂಮಿಶ್ರ ಸರ್ಕಾರದ ಬಿ.ಜೆ.ಪಿ ಮತ್ತು ಜನತಾದಳಗಳ ಮಧ್ಯೆ ಸಂಭವಿಸಿದ 'ಭಯಂಕರ ಯುದ್ಧ'ದಿಂದ ನಾಯಕವರ್ಗದವರಿಗೆ 'ಅನಿಷ್ಟ' ಉಂಟಾಗಿ ನಾಡಿನ ಪ್ರಜೆಗಳು ರಾಜ್ಯಪಾಲರ ಆಡಳಿತದ ಭೀತಿಯಿಂದ 'ಆತಂಕ'ಕ್ಕೆ

ಒಳಗಾಗಿದ್ದಾರೆ! ಇನ್ನು ಹೊಸ ವರ್ಷದ 'ಸರ್ವಧಾರೀ ಸಂವತ್ಸರ'ವನ್ನು ಕುರಿತು ಕೇಳಿ ಬರುವ 'ಪಂಚಾಂಗಶ್ರವಣ'ವೆಂದರೆ **"ಎಲ್ಲಾ ಕಡೆ ಮಳೆ ಬೆಳೆ ಚೆನ್ನಾಗಿ ಆಗುತ್ತದೆ, ರಾಜರು ಚೆನ್ನಾಗಿ ಪ್ರಜಾಪರಿಪಾಲನೆ ಮಾಡುತ್ತಾರೆ"**. ಮುಂಬರುವ ಚುನಾವಣೆಯಲ್ಲಿ (ಅ)ನಾಗರಿಕ ಮತದಾರರಿಗೆ ಕಂಠಪೂರ್ತಿ ಕುಡಿಸಿ ಯಾವ ರಾಜರು ಪಟ್ಟಕ್ಕೇರುತ್ತಾರೆಂದು ಇನ್ನೆರಡು ತಿಂಗಳು ಕಾದು ನೋಡಬೇಕಾಗಿದೆ! ಪಂಚಾಂಗ ನೋಡುವ ಪುರೋಹಿತರಿಗಂತೂ ಶುಕ್ರದೆಸೆ ಆರಂಭವಾಗಿದೆ. ಚುನಾವಣೆ ಸಮೀಪಿಸುತ್ತಿರುವುದರಿಂದ ಅವರ ಗ್ರಹಗತಿಗಳು ಚೆನ್ನಾಗಿವೆ. ರೈತರಿಗೆ ಮಳೆ ಬೆಳೆ ಆಗಲಿ ಬಿಡಲಿ, ರಾಜಕಾರಿಣಿಗಳು ಟಿಕೆಟ್ ಪಡೆಯುವುದರಿಂದ ಹಿಡಿದು, ನಾಮಿನೇಷನ್ ಫೈಲ್ ಮಾಡಿ ಗೆದ್ದು ವಿಧಾನಸಭೆ ಪ್ರವೇಶಿಸಿ ಮಂತ್ರಿಯಾಗಿ ಶಪಥಗ್ರಹಣ ಮಾಡುವವರೆಗೂ ನಡೆಯುವ ಪಂಚಾಂಗ ಶ್ರವಣ, ನವಗ್ರಹ ಶಾಂತಿ, ಹೋಮ, ಹವನ, ಇತ್ಯಾದಿಗಳಿಂದ ಪುರೋಹಿತರಿಗೆ ಸುಭಿಕ್ಷವೋ ಸುಭಿಕ್ಷ! ಬೇಗನೆ ಮತ್ತೊಂದು ಚುನಾವಣೆ ಬರಲೆಂದೇ ಅವರ ಅಂತರಂಗದ ಹಾರೈಕೆ!

ಭಾರತೀಯ ದಾರ್ಶನಿಕರು ಕಾಲವನ್ನು ಎರಡು ಭಾಗವಾಗಿ ವಿಂಗಡಿಸುತ್ತಾರೆ - ಒಂದು ಪರ ಮತ್ತೊಂದು ಅಪರ. ಪರ ಎಂದು ಕರೆಸಿಕೊಳ್ಳುವ ಕಾಲ ಅಖಂಡ. ಅದರಲ್ಲಿ ಭೂತ, ಭವಿಷ್ಯ, ವರ್ತಮಾನಗಳ ಪ್ರಭೇದಗಳು ಇರುವುದಿಲ್ಲ. ಏಕೆಂದರೆ ಅದು ಅನಾದಿ ಮತ್ತು ಅನಂತ. ಅದರ ಅನುಭವ ಮನುಷ್ಯನಿಗೆ ಆಗುವುದು ಕಷ್ಟ. ಏಕೆಂದರೆ ಮನುಷ್ಯನು ಕಾಲ (time) ಮತ್ತು ದೇಶದ (space) ಪರಿಮಿತಿಗೆ ಒಳಪಟ್ಟವನು; ಅವುಗಳನ್ನು ಮೆಟ್ಟಿ ನಿಲ್ಲಲು ಅವನಿಂದ ಸಾಧ್ಯವಿಲ್ಲ. ಕಾಲಾತೀತ, ದೇಶಾತೀತನಾಗಿರಲು ಭಗವಂತನಿಂದ ಮಾತ್ರ ಸಾಧ್ಯ **(ಸ ಭೂಮಿಂ ವಿಶ್ವತೋ ವೃತ್ವಾ ಅತ್ಯತಿಷ್ಠತ್ ದಶಾಂಗುಲಂ - ಪುರುಷಸೂಕ್ತ)**. ಇನ್ನು ಮನುಷ್ಯನ ಗ್ರಹಿಕೆಗೆ ಬರುವ ಕಾಲವನ್ನು 'ಅಪರ' ಎಂದು ಕರೆಯುತ್ತಾರೆ. ಅದು ಭೂತ, ಭವಿಷ್ಯ, ವರ್ತಮಾನವಾಗಿ ಮನುಷ್ಯನ ಜೀವನದಲ್ಲಿ ಅನುಭವಕ್ಕೆ ಬರುತ್ತದೆ. ನಾಳೆಯ ಭವಿಷ್ಯ ಇಂದಿನ ವರ್ತಮಾನವಾಗಿ ಬಂದು ನಿನ್ನೆಯ ಭೂತಕಾಲಕ್ಕೆ ಖಾಯಂ ಆಗಿ ಸರಿದು ಹೋಗುತ್ತದೆ. ಮತ್ತೆ ನಾಳೆಯ ಭವಿಷ್ಯತ್ ಕಾಲದಲ್ಲಿ ಏನು ಕಾದಿದೆಯೋ ಎಂಬ ಆತಂಕದಲ್ಲಿಯೇ ಮನುಷ್ಯ ಸದಾ ಬದುಕುತ್ತಾನೆ. ನಾಳೆಯ ಭವಿಷ್ಯ ಇಂದಿನ ವರ್ತಮಾನದಲ್ಲಿ ಅನುಭವಕ್ಕೆ ಬಂದಾಗ ಅದು ಕೆಲವೊಮ್ಮೆ ಸುಖವಾಗಿ ಪರಿಣಮಿಸಿ ಮನುಷ್ಯನ ಮನಸ್ಸನ್ನು ಉಲ್ಲಾಸಗೊಳ್ಳುವಂತೆ ಮಾಡಬಹುದು ಅಥವಾ ಕೆಲವೊಮ್ಮೆ ದುಃಖವಾಗಿ ಪರಿಣಮಿಸಿ ಮನುಷ್ಯನ ಮನಸ್ಸನ್ನು ಘಾಸಿಗೊಳಿಸಬಹುದು. ಹಾಗೆಯೇ ವರ್ತಮಾನ ಕಾಲದಲ್ಲಿ ಸುಖದ ಅನುಭವವನ್ನು ತಂದು ಆಹ್ಲಾದವನ್ನುಂಟುಮಾಡಿ ಭೂತಕಾಲಕ್ಕೆ ಸರಿದುಹೋದ ಕಾಲ ಸುಖದ ನೆನಪುಗಳನ್ನು ಮತ್ತೆ ಮತ್ತೆ ತಂದು ಕೊಟ್ಟು ಮನುಷ್ಯ ಸದಾ ಅದಕ್ಕಾಗಿ ಹಪ ಹಪಿಸುವಂತೆ ಮಾಡುತ್ತದೆ. ಅಂತೆಯೇ ವರ್ತಮಾನದಲ್ಲಿ ದುಃಖದ ಕಹಿ ಅನುಭವವನ್ನುಂಟು ಮಾಡಿ ಭೂತಕಾಲಕ್ಕೆ ಸರಿದು ಹೋದ ಕಾಲ ಮತ್ತೆ ಮತ್ತೆ ನೆನಪಿಗೆ ಬರಬಹುದಾದರೂ ಮನುಷ್ಯ ಅದನ್ನು ಮರೆಯಲು ಬಯಸುತ್ತಾನೆಯೇ ಹೊರತು ನೆನಪಿಸಿಕೊಳ್ಳಲು ಇಷ್ಟಪಡುವುದಿಲ್ಲ. ಅಷ್ಟೇ ಅಲ್ಲ ಅಂತಹ ಕಹಿ ಅನುಭವ ಮತ್ತೆ ಭವಿಷ್ಯತ್ತಿನಲ್ಲಿ ಉಂಟಾಗುವುದನ್ನೂ ಸಹ ಬಯಸುವುದಿಲ್ಲ. ಆದರೆ ಕಾಲದ ಗತಿ ಮನುಷ್ಯನ ಇಷ್ಟಾನಿಷ್ಟಗಳನ್ನು ಅವಲಂಬಿಸಿರುವುದಿಲ್ಲ. ಅವನಿಗೆ ಇಷ್ಟ ಇರಲಿ ಇಲ್ಲದಿರಲಿ ಸುಖದುಃಖಗಳು ಮನುಷ್ಯನ ಜೀವನದಲ್ಲಿ ಗೋಡೆಯ ಗಡಿಯಾರದ ಲೋಲಕದಂತೆ ಸದಾ ಓಲಾಡುತ್ತಲೇ ಇರುತ್ತವೆ (Life is a pendulam oscillating between joy and sorrow). ಒಮ್ಮೆ ಸುಖ ಬಂದರೆ ಮತ್ತೊಮ್ಮೆ ದುಃಖ. ಅವುಗಳಲ್ಲಿ ಮನುಷ್ಯ ಯಾವಾಗಲೂ ಸುಖವನ್ನೇ ಬಯಸುತ್ತಾನೆ. ಆದರೆ ಜೀವನದಲ್ಲಿ ಹಾಗೆ ಆಗುವುದಿಲ್ಲ. "If wishes were horses, beggars would ride". ಮನುಷ್ಯನ ಬಯಕೆಗಳು ಕುದುರೆಗಳಾಗಿದ್ದರೆ ಭಿಕ್ಷುಕರೂ ಅವುಗಳ ಮೇಲೆ ಸವಾರಿ ಮಾಡುತ್ತಿದ್ದರು! ಜೀವನದ ಗೋಡೆಯ ಗಡಿಯಾರದ ಲೋಲಕ ಸುಖದ ಕಡೆಗೇ ನಿಲ್ಲಲಿ ಎಂದು ಮನುಷ್ಯ ಹಾರೈಸುವುದು ಸಹಜ. ಹಾಗೇನಾದರೂ ಆದರೆ ಮನುಷ್ಯನಿಗೆ ಸುಖದ ತೀವ್ರತರವಾದ ಅನುಭವ ಆಗುವುದಿಲ್ಲ. ಅದರಿಂದ ಜೀವನದಲ್ಲಿ ಸ್ವಾರಸ್ಯ ಇರುವುದಿಲ್ಲ. ಲೋಲಕ ಸದಾ ಚಲಿಸುತ್ತಲೇ ಇರಬೇಕು. ಒಂದೆಡೆ ನಿಲ್ಲುವಂತಾದರೆ ಅದು ಗೋಡೆಯ ಗಡಿಯಾರ ಕೆಟ್ಟಿದೆ ಎಂಬುದರ ಸಂಕೇತ ಎಂಬುದನ್ನು ನಾವು ಮರೆಯಬಾರದು.

ಒಮ್ಮೊಮ್ಮೆ ದುಃಖ-ದುಮ್ಮಾನಗಳು, ಕಷ್ಟ-ಕೋಟಲೆಗಳು ಹಠಾತ್ತನೆ ಸುನಾಮಿ ಅಲೆಯಂತೆ ಎಲ್ಲಿಂದಲೋ ಬಂದು ಒಂದರ ಮೇಲೊಂದರಂತೆ ಸರದಿಯ ಮೇಲೆ ಬಂದೆರಗಿ ಮನುಷ್ಯನನ್ನು ಜರ್ಝರಿತಗೊಳಿಸುತ್ತವೆ. ಅವುಗಳಿಂದ ಪಾರಾಗುವುದು ಕಷ್ಟಸಾಧ್ಯವಾದರೂ ಅಂತಹ ಸಂದರ್ಭಗಳನ್ನು ಧೈರ್ಯವಾಗಿ ಎದುರಿಸಲು ಮನುಷ್ಯ ಸಿದ್ಧನಾಗಿರಬೇಕು. ಹೇಡಿಯಾಗಬಾರದು. "Cowards die many a times before their death" (ಹೇಡಿಗಳಾದವರು ಸಾಯುವುದಕ್ಕೆ ಮುಂಚೆ ಅನೇಕ ಸಾರಿ ಸಾಯುತ್ತಾರೆ) ಎಂದು ಷೇಕ್ಸ್‌ಪಿಯರ್ ಹೇಳುತ್ತಾನೆ. ಕಹಿ ಇದೆ ಎನ್ನುವ ಕಾರಣಕ್ಕಾಗಿಯೇ ಸಿಹಿಯ ಅನುಭವ ಸಾಧ್ಯವಾಗಿರುವುದು. ಒಂದು ಪಕ್ಷ ಕಹಿ ಇಲ್ಲದೇ ಹೋಗಿದ್ದರೆ ಸಿಹಿ ಏನೆಂದು ಅರ್ಥವೇ ಆಗುತ್ತಿರಲಿಲ್ಲ. ಹಾಗೆಯೇ ಸುಖದ ಅನುಭವ. ದುಃಖ ಯಾರಿಗೂ ಬೇಕಿಲ್ಲ, ನಿಜ.

ಆದರೆ ಸುಖ ಏನೆಂದು ತಿಳಿಯುವುದಕ್ಕಾದರೂ ದುಃಖ ಬೇಕೇ ಬೇಕು. ಗೌತಮ ಬುದ್ಧ ಬುದ್ಧನಾಗಿದ್ದು ಅರಮನೆಯ ಸುಖದ ಸುಪ್ಪತ್ತಿಗೆಯಲ್ಲಿ ಓಲಾಡುತ್ತಿದ್ದಾಗ ಅಲ್ಲ; ಹೊರಗೆ ಬಂದು ಜನರ ನೋವು ಸಂಕಷ್ಟಗಳ ಸರಮಾಲೆಯನ್ನು ನೋಡಿ ಮಮ್ಮಲ ಮರುಗಿ ಅಂತರ್ಮುಖಿಯಾಗಿ ಅರಿವಿನ ಕಣ್ತೆರೆದಾಗ.

ಭವಿಷ್ಯದ ಸಂಗತಿಗಳೆಲ್ಲವೂ ಮನುಷ್ಯನಿಗೆ ತಿಳಿಯುವಂತಾಗಿದ್ದರೆ ಜೀವನದಲ್ಲಿ ಸ್ವಾರಸ್ಯವೆಂಬುದೇ ಇರುತ್ತಿರಲಿಲ್ಲ. ಭವಿಷ್ಯದಲ್ಲಿ ಏನಾಗಬಹುದೆಂದು ಇತರರ ಜೀವನಾನುಭವದಿಂದ ಮನುಷ್ಯ ಊಹಿಸಿಕೊಳ್ಳಬಹುದಾದರೂ ಅದರಿಂದ ಪಾಠ ಕಲಿತುಕೊಳ್ಳುವುದಿಲ್ಲ. ರಾತ್ರಿ ಕಂಡ ಬಾವಿಯಲ್ಲಿ ಹಗಲು ಬೀಳುವುದು ಸರಿಯಲ್ಲ ಎಂದು ಗೊತ್ತಿದ್ದರೂ ಮಾಡಿದ ತಪ್ಪನ್ನೇ ಮತ್ತೆ ಮತ್ತೆ ಮಾಡುತ್ತಾನೆ. ಸಂಪತ್ತಿನ ಸಂಗ್ರಹಣೆಯ ನಾಗಾಲೋಟದಲ್ಲಿ ಕೊಚ್ಚಿ ಹೋಗುತ್ತಿದ್ದಾನೆ. ಅಜ್ಞಾತ ಇಂಗ್ಲೀಷ್ ಕವಿಯೊಬ್ಬ ಹೀಗೆ ಹೇಳುತ್ತಾನೆ:

We squander health in search of wealth
We scheme, toil and save;
Then we squander wealth in search of health
All that we get is the Grave!

ಮನುಷ್ಯ ತನ್ನ ಆರೋಗ್ಯವನ್ನು ಲೆಕ್ಕಿಸದೆ ರಾತ್ರಿ ಹಗಲೂ ದುಡಿದು ಹೇರಳವಾಗಿ ಹಣವನ್ನು ಗಳಿಸುತ್ತಾನೆ ಮತ್ತು ಕೂಡಿಡುತ್ತಾನೆ. ಆದರೆ ಕಳೆದು ಹೋದ ಆರೋಗ್ಯವನ್ನು ಮತ್ತೆ ಪಡೆಯಲು ದುಡಿದ ಹಣವೆಲ್ಲವನ್ನೂ ಆಸ್ಪತ್ರೆಗೆ ಖರ್ಚುಮಾಡುತ್ತಾನೆ. ದುಡಿಮೆಯ ಭರಾಟೆಯಲ್ಲಿ, ಸಂಪತ್ತಿನ ಗಳಿಕೆಯಲ್ಲಿ ಜೀವನದ ನಿಜವಾದ ಸುಖವನ್ನು ಸವಿಯದೆ ತನ್ನ ಬದುಕನ್ನೇ ಹಾಳು ಮಾಡಿಕೊಳ್ಳುತ್ತಾನೆ. 'ಧರ್ಮ-ಅರ್ಥ-ಕಾಮ-ಮೋಕ್ಷ' ಎಂಬ ಚತುರ್ವಿಧ ಪುರುಷಾರ್ಥಗಳ ಜಾಗದಲ್ಲಿ 'ನೌಕರಿ-ಕಾರು-ಬಂಗಲೆ-ಸೈಟು' ಎಂಬ ಆಧುನಿಕ ಪುರುಷಾರ್ಥಗಳ ಬೆನ್ನೇರಿ ಹೊರಟಿದ್ದಾನೆ. ಬಂಗಲೆಯಲ್ಲಿ ಬಣ್ಣದ ಟೀವಿಯೇನೋ ಇದೆ. ಆದರೆ ನೋಡಲು ಅವನಿಗೆ ಪುರುಸೊತ್ತಿಲ್ಲ. ಸುಪ್ಪತ್ತಿನ ಹಾಸಿಗೆಯೇನೋ ಇದೆ. ಆದರೆ ಮಲಗಿದರೆ ನಿದ್ರೆ ಬರುವುದಿಲ್ಲ. ನಿದ್ರೆ ಗುಳಿಗೆ ಬೇಕೇ ಬೇಕು. ಹೆಚ್ಚುಕಡಿಮೆ ನುಂಗಿದರೆ ಚಿರನಿದ್ರೆ! ಉಣ್ಣಲು ಷಡ್ರಸೋಪೇತ ಭಕ್ಷ್ಯ ಭೋಜ್ಯಗಳಿವೆ. ಆದರೆ ಸಿಹಿಯುಂಡೆ ತಿನ್ನುವಂತಿಲ್ಲ. ಸಕ್ಕರೆಯುಳ್ಳ ಕಾಫಿ ಕುಡಿಯುವಂತಿಲ್ಲ. ದಿನವೂ ಇನ್ಸುಲಿನ್ ಚುಚ್ಚು ಮದ್ದು ತಪ್ಪಿದ್ದಲ್ಲ. ಕಾರು-ಬಂಗಲೆಯಲ್ಲಿ ಹವಾನಿಯಂತ್ರಿತ ವ್ಯವಸ್ಥೆಯೇನೋ ಇದೆ. ಆದರೂ ತಲೆ ಬಿಸಿ, ಚಡಪಡಿಕೆ! ವಾಸದ ಕೊಠಡಿ ತಣ್ಣಗಿದ್ದರೂ, ಮನಸ್ಸಿನೊಳಗಿನ ಬೇಗುದಿ ತಣ್ಣಗಾಗುವುದಿಲ್ಲ. ಹಾಗಾದರೆ ಹಗಲಿರುಳು ದುಡಿದದ್ದು ಏತಕ್ಕಾಗಿ, ಯಾವ ಪುರುಷಾರ್ಥಕ್ಕಾಗಿ? ಕೊನೆಗೆ ಸಿಕ್ಕಿದ್ದು ಏನು ಅವನಿಗೆ? ನಾಲ್ಕು ಜನರ ಹೆಗಲ ಮೇಲೆ ಪಯಣ! ಎಲ್ಲಿಗೆಂದು ತಿಳಿಯದ ಸ್ಮಶಾನ ಮೌನ! ಆರಡಿ ಮೂರಡಿಯ 'ಮಣ್ಣಿನ ಮನೆ'ಯಲ್ಲಿ ಚಿರಂತನ ಶಯನ! 'ಎಲ್ಲರೂ ಮಾಡುವುದು ಹೊಟ್ಟೆಗಾಗಿ, ಗೇಣು ಬಟ್ಟೆಗಾಗಿ' ಎಂದು ಕನಕದಾಸರು ಹಂಗಿಸಿ ಹಾಡಿದರು. ಆದರೆ ಇಂದಿನ ಗ್ರಾಮ ಪಂಚಾಯಿತಿ ಚುನಾವಣೆಯಿಂದ ಹಿಡಿದು ಅಸೆಂಬ್ಲಿ-ಪಾರ್ಲಿಮೆಂಟ್ ಚುನಾವಣೆವರೆಗೆ ಈಗ 'ಎಲ್ಲರೂ ಮಾಡುವುದು ಓಟಿಗಾಗಿ ಮತ್ತೆ ನೋಟಿಗಾಗಿ' ಎನ್ನುವಂತಾಗಿದೆ. ಮನುಷ್ಯ ತನ್ನ ಹೊಟ್ಟೆ ಪಾಡಿಗಾಗಿ ಮಾತ್ರ ಮಾಡಿದ್ದರೆ ಎಲ್ಲವೂ ಸರಿಹೋಗುತ್ತಿತ್ತು. ಆದರೆ ಮನುಷ್ಯನ ಸ್ವಾರ್ಥಪೂರಿತ ಬಕಾಸುರನ ಹೊಟ್ಟೆಗೆ ಇತಿಮಿತಿಯೇ ಇಲ್ಲ. ಎಷ್ಟಿದ್ದರೂ ಬೇಕು. ಅದೂ ತನಗೇ ಬೇಕು. ಅದನ್ನು ಜೀರ್ಣಿಸಿಕೊಳ್ಳುವ 'ವಾತಾಪಿ ಜೀರ್ಣೋ ಭವ' ಶಕ್ತಿ ತನಗಿಲ್ಲ ಎಂಬ ಪರಿವೆ ಅವನಿಗಿಲ್ಲ. "There is enough in this world for man's need, but not enough for man's greed" (ಈ ಪ್ರಪಂಚದಲ್ಲಿ ಮನುಷ್ಯನ ಅವಶ್ಯಕತೆಗಳನ್ನು ಪೂರೈಸಲು ಬೇಕಾದಷ್ಟಿದೆ; ಆದರೆ ಅವನ ದುರಾಸೆಯನ್ನು ಪೂರೈಸಲು ಸಾಕಷ್ಟಿಲ್ಲ) ಎಂಬ ಗಾಂಧೀಜೀಯ ಮಾತು ನೆನಪಾಗುತ್ತದೆ.

ಲೌಕಿಕ ಜೀವನದ ಸುಖ-ಸಂತೋಷಗಳು ಧರ್ಮದ ನೆಲೆಗಟ್ಟಿನ ಮೇಲೆ ನಿಂತಿರಬೇಕು, ಮೋಕ್ಷದ ಗುರಿಯನ್ನು ಹೊಂದಿರಬೇಕು. ದುಃಖ-ದುಮ್ಮಾನಗಳಿಂದ ವಿಮುಕ್ತನಾಗಿ ಶಾಶ್ವತ ಸುಖವನ್ನು ಪಡೆಯುವ ಹಂಬಲವಿರಬೇಕು. ಬದುಕಿನಲ್ಲಿ ಕೇವಲ ಬೆಲ್ಲವೇ ಇಲ್ಲ; ಬೇವೂ ಸಾಕಷ್ಟು ಇದೆ. ಜೀವನದಲ್ಲಿ ಬರುವ ಸುಖ-ದುಃಖಗಳನ್ನು ಸಮಭಾವದಿಂದ ಸ್ವೀಕರಿಸುವ ಅಗತ್ಯವಿದೆಯೆಂದೇ ಯುಗಾದಿಯ ಹಬ್ಬದಂದು ಬೇವು-ಬೆಲ್ಲವನ್ನು ಬಂಧು-ಬಾಂಧವರಿಗೆ, ಆಪ್ತೇಷ್ಟರಿಗೆ ಹಂಚುವ ಸತ್‌ಸಂಪ್ರದಾಯ ಇರುವುದು. ವರ್ಷಕ್ಕೊಮ್ಮೆ ಯುಗಾದಿಯ ಸಂಜೆಯಂದು ಎಲ್ಲರ ಕಣ್ಣುಗಳು ಪಡುವಣ ದಿಕ್ಕಿನಲ್ಲಿ ನೆಟ್ಟು ಎಳೆವೆಳದಿಂಗಳ ಬಿದಿಗೆಯ ಚಂದ್ರನನ್ನು ನೋಡಲು ತವಕಿಸುತ್ತಿರುತ್ತವೆ. ಆಗಸದಲ್ಲಿ ದಿನವೂ ನಿತ್ಯ ವಿನೂತನ ಚಂದ್ರ ಕಾಣಿಸುತ್ತಿದ್ದರೂ ಬಿದಿಗೆಯ ಚಂದ್ರನನ್ನು ನೋಡುವ ಸಂತೋಷವೇ ಬೇರೆ. ಚಂದ್ರ ಕಂಡ ತಕ್ಷಣವೇ 'ಹೋ..!' ಎಂದು ಕೂಗಿ ಕುಣಿದು ಕುಪ್ಪಳಿಸುವ ಮಕ್ಕಳ ಆ ಆನಂದ, 'ಚಂದ್ರನನ್ನು ನೋಡಿದಿರಾ?' ಎಂದು ಅಕ್ಕಪಕ್ಕದವರನ್ನು ವಿಚಾರಿಸುವ ಮಧ್ಯವಯಸ್ಕರ

ಉಭಯಕುಶಲೋಪರಿ, ಚಂದ್ರದರ್ಶನವಾದ ತಕ್ಷಣವೇ ಧನ್ಯತೆಯಿಂದ ಬೀಗಿ ಗುರುಹಿರಿಯರಿಗೆ ಶ್ರದ್ಧಾಭಕ್ತಿಯಿಂದ ಬಾಗಿ ನಮಸ್ಕರಿಸುವ ಆ ಭಾವಪರವಶತೆ, ಕಣ್ಣು ಮಂಜಾಗಿ ಸರಿಯಾಗಿ ಕಾಣಿಸದ ಅಜ್ಜ-ಅಜ್ಜಿಗಳಿಗೆ ಚಂದ್ರನೆಲ್ಲಿದ್ದಾನೆಂದು ತೋರಿಸಿಕೊಡುವ ಮೊಮ್ಮಕ್ಕಳ ತವಕ ವರ್ಣಿಸಲಸದಳ. ಆ ಮೊಮ್ಮಕ್ಕಳಿಗೇನು ಗೊತ್ತು! ಆಗಸದಲ್ಲಿ ಅವರಿಗೆ ಬಾಯಲ್ಲಿ ಸವೆದ ಪೆಪ್ಪರ್‌ಮೆಂಟಿನಾಕಾರದ ಒಂದು ಚಂದ್ರ ಕಂಡರೆ, ಜೀವನದ ಮುಸ್ಸಂಜೆಯಲ್ಲಿರುವ ಆ ಹಿರಿಯರಿಗೆ ಕಾಣಿಸುವುದು ಆಕಾಶದ ಆ ಚಂದ್ರನಲ್ಲ, ಅವರಿಗೆ ತಮ್ಮ ವಂಶದ ಕುಡಿಯಾದ ಮುದ್ದುಮುಖದ ಹಾಲುಗಲ್ಲದ ಆ ಮೊಮ್ಮಕ್ಕಳೇ ಹತ್ತಾರು ಬಗೆಯ ಬಿದಿಗೆಯ ಚಂದ್ರ! ಮುಂದೆ ಮುಗಿಲೆತ್ತರಕ್ಕೆ ಅವರು ಬೆಳೆಯುವಂತಾಗಲಿ ಎಂಬ ಹೆಬ್ಬಯಕೆಯ ಆಶಾಗೋಪುರ!

ಚಿಂತನಶೀಲ ಓದುಗರೇ! ಕೆಲವೊಮ್ಮೆ ನಿತ್ಯ ಜೀವನದಲ್ಲಿ ನಿಮಗೆ ಬಹಳ ಬೇಕಾದವರು ಅಪರೂಪಕ್ಕೆ ಸಿಕ್ಕರೆ ಸಂತೋಷಪಟ್ಟು 'ಯುಗಾದಿ ಚಂದ್ರನನ್ನು ನೋಡಿದಂತಾಯಿತು!' ಎಂದು ಉದ್ಗರಿಸುತ್ತೀರಲ್ಲವೇ? ಆದರೆ ಬಿದಿಗೆ ಚಂದ್ರನಂತೆ ಪ್ರಿಯವಾದ ಆ ವ್ಯಕ್ತಿಯನ್ನು ನೋಡಲು ನೀವು ನಿಜವಾಗಿಯೂ ಮಾಡಿದ ಪ್ರಯತ್ನ ಏನು? ನೋಡಲು ಸಾಧ್ಯವಾಗದೆ ಹತಾಶೆಗೊಂಡ ದಿನಗಳು ಎಷ್ಟು? ಅಂತೆಯೇ ನಿಮ್ಮನ್ನು ಕಾಣಲು ಹಾತೊರೆವ ಜೀವಗಳಿಗೆ ನೀವು ಕಾಣಿಸಿಕೊಂಡದ್ದು ಎಷ್ಟು? ಪರಿತಪಿಸಿದ್ದು ಎಷ್ಟು? ಕಾಲದ ಕಾರ್ಮೋಡದಲ್ಲಿ ಅಡಗಿ ಕಣ್ಮರೆಯಾಗುವ ಮುನ್ನ ಅವರನ್ನು ಕಂಡು ಮಾತನಾಡಿಸಿರಿ. ಬದುಕಿನ ಒಬ್ಬಟ್ಟಿನ ಸವಿ ನಿಮಗೆ ಸಿಗುವುದು ಆಗಲೇ! ಕರ್ನಾಟಕದ ಮನೆಮನೆಯಲ್ಲಿ ಅತ್ಯಂತ ಸಡಗರ-ಸಂಭ್ರಮದಿಂದ ಆಚರಿಸಲಿರುವ ಸರ್ವಧಾರೀ ಸಂವತ್ಸರದ ಯುಗಾದಿಯ ಶುಭ ಸಂದರ್ಭದಂದು ನಿಮ್ಮೆಲ್ಲರಿಗೂ ಹಾರ್ದಿಕ ಶುಭಾಶಯಗಳು!

31.3.2008

ಶ್ರೀ ತರಳಬಾಳು ಜಗದ್ಗುರು
ಡಾ॥ ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳವರು
ಸಿರಿಗೆರೆ

❑